**ಸಾಕ್ಷಿಗೆ ದಿನಾಂಕ 01.07.2026 ರಂದು ಪ್ರಮಾಣ ವಚನ ನೀಡಲಾಯಿತು.**

ನಾನು ಈ ಅರ್ಜಿಯಲ್ಲಿ ಅರ್ಜಿದಾರರಾಗಿದ್ದು ನನ್ನ ಪ್ರಮಾಣೀಕೃತ ಹೇಳಿಕೆಯನ್ನು ಹೆಚ್ಚುವರಿ ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಪ್ರಮಾಣ ಪತ್ರದಲ್ಲಿ ಹೇಳಲಾದ ಎಲ್ಲಾ ವಿಷಯಗಳು ಸತ್ಯ ಇರುತ್ತವೆ. ಪ್ರಮಾಣ ಪತ್ರದರಲ್ಲಿ ಇರುವ ಸಹಿ ನನ್ನ ಸಹಿ ಆಗಿರುತ್ತವೆ.

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ನಾನು ನನ್ನ ವಂಶವೃಕ್ಷವನ್ನು ತೋರಿಸಲು ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಅಲಭ್ಯ ಪ್ರಮಾಣ ಪತ್ರವನ್ನು ನಿಪಿ-2 ಎಂದು, 3 ಆಧಾರ ಕಾರ್ಡನ ನೋಟರೀಕೃತ ನಕಲನ್ನು ಹಾಜರುಪಡಿಸಿದ್ದು (ಮೂಲ ದಾಖಲೆಯೊಂದಿಗೆ ತಾಳೆ ನೋಡಲಾಯಿತು) ನಿಪಿ-3 ರಿಂದ 5 ಎಂದು, ದಿನಾಂಕ 07.04.2026 ರಂದು ಪ್ರಜಾ ಸತ್ಯ ಎದುರುದಾರರಿಗೆ ಹೊರಡಿಸಿದ ಪತ್ರಿಕಾ ಪ್ರಕಟಣೆಯ ದಿನಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ದಿನಾಂಕ 07.04.2026 ರಂದು ರಾಜ್ಯ ಧರ್ಮ ಎದುರುದಾರರಿಗೆ ಹೊರಡಿಸಿದ ಪತ್ರಿಕಾ ಪ್ರಕಟಣೆಯ ದಿನಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ಆದ್ದರಿಂದ ಎದುರುದಾರರಿಗೆ ಸೂಕ್ತ ನಿರ್ದೇಶನ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

**ಎದುರುದಾರರು ಏಕ ಪಕ್ಷಿಯರಾಗಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರುವಿಚಾರಣೆ ಇಲ್ಲ.**

**ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

**ಸಾ.ಓ.ಹೇ.ಸ.ಒ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ**
**ಹುಣಸೂರು**